ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 04–09–2021

# ಮಾಧ್ಯಮ ಆಹ್ವಾನ

# Media Invitation

## 1. ರಾಜ್ಯದ ರೈತರ ಮಕ್ಕಳ ಉನ್ನತ ಶಿಕ್ಷಣಕ್ಕೆ "ಮುಖ್ಯಮಂತ್ರಿಗಳ ರೈತ ವಿದ್ಯಾ ನಿಧಿ" ಯೋಜನೆಯ ಲೋಕಾರ್ಪಣೆ ಕಾರ್ಯಕ್ರಮ

**ಉದ್ಘಾಟನೆ:**
ಬಸವರಾಜ ಎಸ್ ಬೊಮ್ಮಾಯಿ
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

ವಿದ್ಯಾರ್ಥಿಗಳ ಖಾತೆಗೆ ವಿದ್ಯಾ ನಿಧಿ ವರ್ಗಾವಣೆಗೆ ಚಾಲನೆ:
ನರೇಂದ್ರ ಸಿಂಗ್ ತೋಮರ್
ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವರು, ಭಾರತ ಸರ್ಕಾರ.

ವಿದ್ಯಾರ್ಥಿಗಳಿಗೆ ಸಾಂಕೇತಿಕ ಚೆಕ್ ವಿತರಣೆ:
ಶೋಭಾ ಕರಂದ್ಲಾಜೆ
ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ರಾಜ್ಯ ಸಚಿವರು, ಭಾರತ ಸರ್ಕಾರ.

ಪ್ರಾಸ್ತಾವಿಕ ನುಡಿ
ಬಿ.ಸಿ.ಪಾಟೀಲ್
ಮಾನ್ಯ ಕೃಷಿ ಸಚಿವರು, ಕರ್ನಾಟಕ ಸರ್ಕಾರ.

ಅಧ್ಯಕ್ಷತೆ:
ರಿಜ್ವಾನ್ ಅರ್ಷದ್
ಶಾಸಕರು, ಶಿವಾಜಿನಗರ ವಿಧಾನಸಭಾ ಕ್ಷೇತ್ರ.

ದಿನಾಂಕ: 05–09–2021, ಭಾನುವಾರ, ಸಮಯ: ಬೆಳಿಗ್ಗೆ 10.30 ಗಂಟೆಗೆ

ಸ್ಥಳ: ಬ್ಯಾಂಕ್ವೆಟ್ ಹಾಲ್, ವಿಧಾನಸೌಧ, ಬೆಂಗಳೂರು.

## 2. ಶಿಕ್ಷಕರ ದಿನಾಚರಣೆ ಸಮಾರಂಭ–2021

**ಉದ್ಘಾಟನೆ :**
ಬಸವರಾಜ ಎಸ್. ಬೊಮ್ಮಾಯಿ
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

ವಿಶೇಷ ಅಹ್ವಾನಿತರು :
ಶ್ರೀಮತಿ ನಿರ್ಮಲಾ ಸೀತಾರಾಮನ್,
ಕೇಂದ್ರ ಹಣಕಾಸು ಮತ್ತು ಕಾರ್ಪೋರೇಟ್ ವ್ಯವಹಾರಗಳ ಸಚಿವರು, ಭಾರತ ಸರ್ಕಾರ

ಎಂ. ರಾಜೀವ್ ಚಂದ್ರಶೇಖರ್
ಕೇಂದ್ರ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಎಲೆಕ್ಟ್ರಾನಿಕ್ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು, ಭಾರತ ಸರ್ಕಾರ.

ಎ.ನಾರಾಯಣಸ್ವಾಮಿ
ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ರಾಜ್ಯ ಸಚಿವರು, ಭಾರತ ಸರ್ಕಾರ.

ಘನ ಉಪಸ್ಥಿತಿ:
ಡಾ.ಸಿ.ಎನ್.ಅಶ್ವಥ್ ನಾರಾಯಣ
ಮಾನ್ಯ ಉನ್ನತ ಶಿಕ್ಷಣ, ಐ.ಟಿ–ಬಿ.ಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಸಚಿವರು, ಕರ್ನಾಟಕ ಸರ್ಕಾರ

ಅಧ್ಯಕ್ಷತೆ:
ರಿಜ್ವಾನ್ ಅರ್ಷದ್
ಶಾಸಕರು, ಶಿವಾಜಿನಗರ ವಿಧಾನಸಭಾ ಕ್ಷೇತ್ರ.

**ದಿನಾಂಕ: 05–09–2021, ಭಾನುವಾರ, ಸಮಯ: ಬೆಳಿಗ್ಗೆ 10.30 ಗಂಟೆಗೆ**

ಸ್ಥಳ: ಜ್ಞಾನಜ್ಯೋತಿ ಸಭಾಂಗಣ, ಸೆಂಟ್ರಲ್ ಕಾಲೇಜು ಕ್ಯಾಂಪಸ್, ಬೆಂಗಳೂರು.

## 3. ರಾಜ್ಯ ಮಟ್ಟದ ಶಿಕ್ಷಕರ ದಿನಾಚರಣೆ–2021 ಹಾಗೂ ರಾಜ್ಯ ಪ್ರಶಸ್ತಿ ಪುರಸ್ಕೃತ ಶಿಕ್ಷಕರಿಗೆ ಪ್ರಶಸ್ತಿ ಪ್ರದಾನ ಸಮಾರಂಭ:

### ಉದ್ಘಾಟನೆ ಮತ್ತು ಪ್ರಶಸ್ತಿ ಪ್ರದಾನ:
ಬಸವರಾಜ ಎಸ್. ಬೊಮ್ಮಾಯಿ
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

### ವಿಶೇಷ ಆಹ್ವಾನಿತರು:
ಶ್ರೀಮತಿ ನಿರ್ಮಲಾ ಸೀತಾರಾಮನ್,
ಕೇಂದ್ರ ಹಣಕಾಸು ಮತ್ತು ಕಾರ್ಪೋರೇಟ್ ವ್ಯವಹಾರಗಳ ಸಚಿವರು, ಭಾರತ ಸರ್ಕಾರ

ಎಂ. ರಾಜೀವ್ ಚಂದ್ರಶೇಖರ್
ಕೇಂದ್ರ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಎಲೆಕ್ಟ್ರಾನಿಕ್ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು, ಭಾರತ ಸರ್ಕಾರ.

ಪ್ರಾಸ್ತಾವಿಕ ನುಡಿ:
ಬಿ.ಸಿ.ನಾಗೇಶ್
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು, ಕರ್ನಾಟಕ ಸರ್ಕಾರ

ಅಧ್ಯಕ್ಷತೆ:
ರಿಜ್ವಾನ್ ಅರ್ಷದ್
ಶಾಸಕರು, ಶಿವಾಜಿನಗರ ವಿಧಾನಸಭಾ ಕ್ಷೇತ್ರ.

**ದಿನಾಂಕ: 05–09–2021, ಭಾನುವಾರ, ಸಮಯ: ಮಧ್ಯಾಹ್ನ 3.00 ಗಂಟೆಗೆ**

**ಸ್ಥಳ: ಬ್ಯಾಂಕ್ವೆಟ್ ಹಾಲ್, ವಿಧಾನಸೌಧ, ಬೆಂಗಳೂರು.**

## 4. ಕರ್ನಾಟಕ ರಾಜ್ಯ "ಹಿರಿಯ ಪೊಲೀಸ್ ಅಧಿಕಾರಿಗಳ ಸಮಾವೇಶ"

**ಉದ್ಘಾಟನೆ:**

**ಬಸವರಾಜ ಎಸ್. ಬೊಮ್ಮಾಯಿ**
**ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.**

**ಅರಗ ಜ್ಞಾನೇಂದ್ರ**
**ಗೃಹ ಸಚಿವರು, ಕರ್ನಾಟಕ ಸರ್ಕಾರ.**

**ದಿನಾಂಕ: 06–09–2021, ಸೋಮವಾರ, ಸಮಯ: ಬೆಳಿಗ್ಗೆ 10.30 ಗಂಟೆಗೆ**

**ಸ್ಥಳ: ಪೊಲೀಸ್ ಪ್ರಧಾನ ಕಛೇರಿಯ ಸಮ್ಮೇಳನ ಸಭಾಂಗಣ, ನೃಪತುಂಗ ರಸ್ತೆ, ಬೆಂಗಳೂರು.**

**ವಿಶೇಷ ಸೂಚನೆ : ಈ ಸಮಾವೇಶದ ಉದ್ಘಾಟನೆ ಸಮಯದಲ್ಲಿ ಮೊದಲ 5 ನಿಮಿಷಗಳು ಮಾತ್ರ ಮಾಧ್ಯಮದವರಿಗೆ ಚಿತ್ರೀಕರಿಸಲು ಅವಕಾಶ ನೀಡಲಾಗಿದ್ದು, ಸಮಾವೇಶದ ನಂತರ ಅಪರಾಹ್ನ 12.00 ಗಂಟೆಗೆ ಸನ್ಮಾನ್ಯ ಮುಖ್ಯಮಂತ್ರಿಗಳು ಪತ್ರಿಕಾ ಗೋಷ್ಠಿ ನಡೆಸಲಿದ್ದಾರೆ**

# ಪತ್ರಿಕಾ ಪ್ರಕಟಣೆ

**PRESS RELEASE**

## ಸಚಿವರ ಪ್ರವಾಸ

ಬೆಂಗಳೂರು, ಸೆಪ್ಟೆಂಬರ್ 04 (ಕರ್ನಾಟಕ ವಾರ್ತೆ):

ಗಣಿ ಮತ್ತು ಭೂವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರಾದ ಆಚಾರ ಹಾಲಪ್ಪ ಬಸಪ್ಪ ಅವರು ಸೆಪ್ಟೆಂಬರ್ 04 ಮತ್ತು 05 ರಂದು ಕೊಪ್ಪಳ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಛಾಯಾಚಿತ್ರ ಶೀರ್ಷಿಕೆ:

ಬೆಂಗಳೂರು, ಸೆಪ್ಟೆಂಬರ್ 04 (ಕರ್ನಾಟಕ ವಾರ್ತೆ):

ಇಂದು ರಾಜಭವನದಲ್ಲಿ ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಲೋಕಸಭಾ ಮಾಜಿ ಉಪಸಭಾಪತಿ ಹಾಗೂ ರಾಜ್ಯಸಭಾ ಸಂಸದರಾದ ಎಂ ತಂಬಿದೊರೈ ಅವರು ಭೇಟಿ ಮಾಡಿದರು.

Shri M. Thambidurai, MP Rajyasabha, Former Deputy Speaker of Loksabha and former union minister called on Shri Thaawarchand Gehlot, Hon'ble Governor of Karnataka at Raj Bhavan today

## ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ 600 ಕೋಟಿ ರೂ ಅನುದಾನ ಬಿಡುಗಡೆ

**– ಸಭಾಪತಿ ಬಸವರಾಜ ಹೊರಟ್ಟಿ**

ಬೆಂಗಳೂರು, ಸೆಪ್ಟೆಂಬರ್ 04 (ಕರ್ನಾಟಕ ವಾರ್ತೆ):

ವಿಧಾನ ಪರಿಷತ್ತಿನ ಇತಿಹಾಸದಲ್ಲಿಯೇ ಪ್ರಥಮ ಬಾರಿಗೆ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ 600 ಕೋಟಿ ರೂ ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅವರು ತಿಳಿಸಿದರು.

ಇಂದು ವಿಧಾನಸೌಧದಲ್ಲಿ ವಿಧಾನ ಪರಿಷತ್ತಿನ ಸಭಾಪತಿಗಳ ಅಧ್ಯಕ್ಷತೆಯಲ್ಲಿ ಕರೆಯಲಾಗಿದ್ದ ಶಾಸಕರ ಸ್ಥಳೀಯ ಪ್ರದೇಶಾಭಿವೃದಧಿ ಅನುದಾನವನ್ನು ಕಡಿತ ಮಾಡುವ ಬಗ್ಗೆ ಮತ್ತು ಬಯಲು ಸೀಮೆ ವ್ಯಾಪ್ತಿಗೆ ಬರುವ ವಿಧಾನ ಸಭೆ ಕ್ಷೇತ್ರಗಳ ಅಭಿವೃದ್ಧಿಗೆ ಘೋಷಿಸಿದ್ದ ಅನುದಾನ ಬಿಡುಗಡೆಯಾಗದಿರುವ ಕುರಿತು ರಚಿಸಲಾಗಿದ್ದ ಐವರು ಸದಸ್ಯರ ಅಂತಿಮ ಸಭೆಯ ಅಧ್ಯಕ್ಷತೆ ವಹಿಸಿ ನಂತರ ಮಾತನಾಡಿದ ಅವರು ಶಾಸಕರ ಅನುದಾನ ಬಿಡುಗಡೆ ವಿಳಂಬ ಕುರಿತು ಇದ್ದ ಅಡೆತಡೆ ನಿವಾರಿಸುವ ಸಲುವಾಗಿ ಎಲ್ಲಾ ರಾಜಕೀಯ ಪಕ್ಷಗಳ ಸದಸ್ಯರನ್ನೊಳಗೊಂಡ 5 ಜನರ ಸಮಿತಿ ರಚಿಸಲಾಗಿತ್ತು ಎಂದು ತಿಳಿಸಿದರು.

ಆ ಸಮಿತಿಯ ಸಭೆಯನ್ನು ಸಹ 13-08-2021 ರಂದು ನಡೆಸಲಾಯಿತು. ಆರ್ಥಿಕ ಹಾಗೂ ಯೋಜನಾ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ ಅನುದಾನ ಬಿಡುಗಡೆಗೆ ಇದ್ದ ಆತಂಕಗಳ ನಿವಾರಣೆಗೆ ಸೂಕ್ತ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಎರಡೂ ಸಭೆಗಳು ಯಶಸ್ವಿಯಾಗಿದ್ದು, ಅದರ ಫಲಶ್ರುತಿಯಾಗಿ ಬಿಡುಗಡೆಗೆ ಬಾಕಿ ಇದ್ದ ಅನುದಾನ ಸುಮಾರು 600ಕೋಟಿ ಬಿಡುಗಡೆಯಾಗಿದೆ.

ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನ ಬಿಡುಗಡೆಗೆ ಇದ್ದ ನೀತಿ ನಿಯಮಗಳನ್ನು ಸರಳೀಕರಣಗೊಳಿಸಿ ಪರಿಷ್ಕರಿಸಲಾದ ಮಾರ್ಗಸೂಚಿಗಳ ಅನುಷ್ಠಾನಕ್ಕೆ ಕಾರ್ಯ ಪ್ರವೃತ್ತರಾಗಿರುವುದು ಸಂತಸದ ಸಂಗತಿ. 2021-22ನೇ ಸಾಲಿನ ಮೊದಲ ಕಂತು ಸುಮಾರು 150 ಕೋಟಿ ಈಗಾಗಲೇ ಬಿಡುಗಡೆಯಾಗಿದ್ದು ಜಿಲ್ಲಾಧಿಕಾರಿಗಳ ಖಾತೆಗೆ ಜಮೆಯಾಗಿದೆ.

ಸಭೆಯಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಬಾಕಿ ಇದ್ದ 2018-19, 2019-20, 2020-21 ನೇ ಸಾಲಿನ ಅನುದಾನವನ್ನು ಬಾಕಿ ಅನುದಾನ ಬಿಡುಗಡೆ ಮಾಡಲು ಅಧಿಕಾರಿಗಳಿಗೆ ಸೂಚಿಸಲಾಯಿತು.

2021-22ನೇ ಸಾಳಿಗೆ 1 ಕೋಟಿ ರೂಪಾಯಿ ಅನುದಾನ ಬದಲು 2ಕೋಟಿ ರೂ ಅನುದಾನ ಮಂಜೂರು ಮಾಡುವ ಬಗ್ಗೆ ಸೂಚಿಸಲಾಯಿತು. ಅದರಂತೆ ಕೂಡಲೇ ಎಲ್ಲಾ ಶಾಸಕರಿಗೆ 2021-22ನೇ ಸಾಳಿಗೆ ಕ್ರಿಯಾ ಯೋಜನೆ ರೂಪಿಸಲು ಅನುಮತಿ ನೀಡಿ ಎಲ್ಲಾ ಜಿಲ್ಲಾಧಿಕಾರಿಗಳು ಎರಡು ಕೋಟಿ ರೂಗಳಿಗೆ ಕ್ರಿಯಾ ಯೋಜನೆ ರೂಪಿಸಲು ಅನುಮೋದನೆ ನೀಡಲಾಯಿತು.

ಮಾರ್ಗಸೂಚಿಗಳ ಪ್ರಕಾರ ಪ್ರತಿ ವರ್ಷ ಜೂನ್ ಅಂತ್ಯದೊಳಗಾಗಿ ಕ್ರಿಯಾ ಯೋಜನೆ ಅಂತಿಮಗೊಳಿಸಿ ಕಾಮಗಾರಿಗಳ ಪ್ರಗತಿಗೆ ಅನುಗುಣವಾಗಿ ಅನುದಾನ ಬಿಡುಗಡೆ ಮಾಡುವ ಕುರಿತು ಒಪ್ಪಿಗೆ ಸೂಚಿಸಲಾಗಿದೆ. ಇನ್ನು ಮುಂದೆ ಯೋಜನಾ ಇಲಾಖೆಯು ಅನುದಾನವನ್ನು ಕ್ಷೇತ್ರ ವಾರು ಬಿಡುಗಡೆ ಮಾಡುವ ಬದಲು ಜಿಲ್ಲಾವಾರು ಬಿಡುಗಡೆ ಮಾಡಲು ಆದೇಶ ನೀಡಲಾಗಿದೆ. ಲಭ್ಯವಿರುವ ಅನುದಾನವನ್ನು ಸ್ಥಳೀಯ ಜಿಲ್ಲಾಧಿಕಾರಿಗಳು ಪ್ರತಿ ಕ್ಷೇತ್ರಕ್ಕೆ 2 ಕೋಟಿ ರೂಗಳ ಮಿತಿಯಲ್ಲಿ ಪ್ರಗತಿಯಾಧರಿಸಿ ಹಣ ಪಾವತಿಸಲು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಆದೇಶಸಲಾಗಿದೆ.

2020-21 ನೇ ಸಾಲಿನಲ್ಲಿ ಪ್ರತಿ ಕ್ಷೇತ್ರಕ್ಕೆ 1ಕೋಟಿ ರೂ. ಕಾಮಗಾರಿ ಕೈಗೊಳ್ಳಲು ಅನುಮೋದನೆ ನೀಡಲಾಗಿತ್ತು. ಹೆಚ್ಚುವರಿಯಾಗಿ ಬಿಡುಗಡೆಯಾಘಿರುವ ಅನುದಾನ ಪ್ರತಿ ಕ್ಷೇತ್ರಕ್ಕೆ 1 ಕೋಟಿ ರೂಪಾಯಿಗಳನ್ನು 2019-20ನೇ ಸಾಲಿಗೆ ವರ್ಗಾಯಿಸಿಕೊಂಡು ಕಾಮಗಾರಿಗಳನ್ನು ಪೂರ್ಣಗೊಳಿಸಲು ಸೂಚಿಸಲಾಗಿದೆ.

2018-19ನೇ ಸಾಳಿಗೆ ಸಂಬಂಧಿಸಿದಂತೆ ಪ್ರತಿ ಕ್ಷೇತ್ರಕ್ಕೆ ಬಿಡುಗಡೆಗೆ ಬಾಕಿ ಇರುವ 127.67 ಕೋಟಿಯನ್ನು ಬಿಡುಗಡೆಗೊಳಿಸಲು ಪ್ರಸ್ತುತ ಜಿಲ್ಲಾಧಿಕಾರಿಗಳ ಪಿ.ಡಿ.ಖಾತೆಯಲ್ಲಿ ಲಭ್ಯವಿರುವ ಅನುದಾನವನ್ನು ಬಳಸಿಕೊಳ್ಳುವಂತೆ ತಿಳಿಸಲಾಗಿದೆ ಎಂದು ಹೇಳಿದರು.

ವಿಧಾನಪರಿಷತ್ತಿನ ಇತಿಹಾಸದಲ್ಲೇ ಪ್ರಥಮ ಬಾರಿಗೆ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ 600 ಕೋಟಿ ರೂ ಅನುದಾನ ಬಿಡುಗಡೆಯಾಗಿರುವುದು ಶ್ಲಾಘನೀಯವಾಗಿದೆ ಎಂದು ವಿಧಾನ ಪರಿಷತ್ತಿನ ಸದಸ್ಯರಾದ ಕೆ.ಸಿ.ಕೊಂಡಯ್ಯ, ಹನುಮಂತ ನಿರಾಣಿ ಹಾಗೂ ಅಪ್ಪಾಜಿಗೌಡ ಅವರು ಸರ್ಕಾರಕ್ಕೆ ಧನ್ಯವಾದಗಳನ್ನು ಸಲ್ಲಿಸಿದರು.

## ವಿದ್ಯಾರ್ಥಿ ಪಾಸಿನ ಮಾನ್ಯತಾ ಅವಧಿ ವಿಸ್ತರಣೆ

ಬೆಂಗಳೂರು, ಸೆಪ್ಟೆಂಬರ್ 04 (ಕರ್ನಾಟಕ ವಾರ್ತೆ):

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಕೋವಿಡ್ -19 ಸಾಂಕ್ರಾಮಿಕ ರೋಗದ ಹಿನ್ನೆಯಲ್ಲಿ ಶಿಕ್ಷಣ ಇಲಾಖೆಯು ಆಗಸ್ಟ್ ಮತ್ತು ಸೆಪ್ಟೆಂಬರ್ -21ರ ಮಾಹೆಯಲ್ಲಿ ಶಾಲಾ/ಕಾಲೇಜುಗಳನ್ನು ಪ್ರಾರಂಭ ಮಾಡಲು ಕ್ರಮ ಕೈಗೊಂಡಿರುತ್ತದೆ. ಆದ್ದರಿಂದ ಸಂಸ್ಥೆಯು ವಿದ್ಯಾರ್ಥಿಗಳ ಹಿತವನ್ನು ಗಮನದಲ್ಲಿಟ್ಟುಕೊಂಡು ಸಂಸ್ಥೆಯ ಸಾಮಾನ್ಯ ಸೇವೆಗಳಲ್ಲಿ ವಿದ್ಯಾರ್ಥಿಗಳು ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ.

6ರಿಂದ 10ನೇ ತರಗತಿ ಮತ್ತು ಪಿ.ಯು.ಸಿ (11+12) ವಿದ್ಯಾರ್ಥಿಗಳಿಗೆ ಹಾಗೂ ಪ್ರಥಮ ವರ್ಷದ ಪದವಿ ವಿದ್ಯಾರ್ಥಿಗಳಿಗೆ 2020-21 ನೇ ಸಾಲಿನ ವಿದ್ಯಾರ್ಥಿ ಪಾಸು ಅಥವಾ 2021-22 ನೇ ಸಾಲಿನ ಶುಲ್ಕ ರಸೀದಿ ಅಥವಾ ಗುರುತಿನ ಚೀಟಿಯೊಂದಿಗೆ ಮುಂದಿನ ಆದೇಶದವರೆಗೂ ಪ್ರಯಾಣಿಸಲು ಅವಕಾಶ, ಐ.ಟಿ.ಐ, ಡಿಪ್ಲಮೋ, ಪದವಿ (ಪ್ರಥಮ ವರ್ಷ ವಿದ್ಯಾರ್ಥಿಗಳನ್ನು ಹೊರತುಪಡಿಸಿ), ಸ್ನಾತಕೋತ್ತರ, ಪಿ.ಹೆಚ್.ಡಿ, ತಾಂತ್ರಿಕ ಮತ್ತು ವೈದ್ಯಕೀಯ ಕಾಲೇಜು, ಸಂಜೆ ಕಾಲೇಜು ವಿದ್ಯಾರ್ಥಿಗಳಿಗೆ 2020-21ನೇ ಸಾಲಿನ ವಿದ್ಯಾರ್ಥಿ ಪಾಸಿನ ಮಾನ್ಯತಾ ಅವಧಿಯನ್ನು ಸೆಪ್ಟೆಂಬರ್ 30ರವರೆಗೆ ವಿಸ್ತರಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಹೊಯ್ಸಳ, ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 04 (ಕರ್ನಾಟಕ ವಾರ್ತೆ):

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ 6 ರಿಂದ 18 ವರ್ಷದೊಳಗಿನ ಮಕ್ಕಳು ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯ ಪ್ರಜ್ಞೆಯಿಂದ ಇತರರ ಪ್ರಾಣದ ರಕ್ಷಣೆಗಾಗಿ ಧೈರ್ಯ ಸಾಹಸ ಪ್ರದರ್ಶಿಸಿದ ಬಾಲಕರಿಗೆ ಹೊಯ್ಸಳ ಮತ್ತು ಬಾಲಕಿಯರಿಗೆ ಕೆಳದಿ ಚೆನ್ನಮ್ಮ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಪ್ರಶಸ್ತಿಯನ್ನು ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರದಾನ ಮಾಡಲಾಗುವುದು. ಧೈರ್ಯ ಸಾಹಸ ಪ್ರದರ್ಶನ ಆಗಸ್ಟ್ 01, 2020 ರಿಂದ ಜುಲೈ 31, 2021 ರೊಳಗೆ ನಡೆದಿರಬೇಕು. ದಿನಾಂಕ: 01-08-2003 ರಂದು ಹಾಗೂ ನಂತರ ಜನಿಸಿದ ಮಕ್ಕಳು ಈ ಪ್ರಶಸ್ತಿಗೆ ಅರ್ಹರಾಗಿರುತ್ತಾರೆ. ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ ತಲಾ ರೂ.10,000/- ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ನೀಡಲಾಗುವುದು.

ಅರ್ಜಿ ನಮೂನೆಗಳನ್ನು ಸಂಬಂಧಿಸಿದ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರಿಂದ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ: 31-09-2021ರೊಳಗೆ ಸಲ್ಲಿಸತಕ್ಕದ್ದು ಎಂದು ಜಂಟಿ ನಿರ್ದೇಶಕರು (ಪಿಡಿಎಂ), ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯ ಮಟ್ಟದ ಉತ್ತಮ ಶಿಕ್ಷಕರ ಪ್ರಶಸ್ತಿಗೆ ಆಯ್ಕೆ

ಬೆಂಗಳೂರು, ಸೆಪ್ಟೆಂಬರ್ 04 (ಕರ್ನಾಟಕ ವಾರ್ತೆ):

2021-22 ನೇ ಸಾಲಿಗೆ ರಾಜ್ಯ ಮಟ್ಟದ ಉತ್ತಮ ಶಿಕ್ಷಕರ ಪ್ರಶಸ್ತಿಗಾಗಿ ಪ್ರಾಥಮಿಕ ಶಾಲಾ ವಿಭಾಗದಿಂದ 20 ಶಿಕ್ಷಕರು ಮತ್ತು ಪ್ರೌಢ ಶಾಲಾ ವಿಭಾಗದಿಂದ 11 ಶಿಕ್ಷಕರನ್ನು (ಒಂದು ವಿಶೇಷ ಶಿಕ್ಷಕರೂ ಒಳಗೊಂಡಂತೆ) ಆಯ್ಕೆ ಮಾಡಲಾಗಿದೆ.

2021-22ನೇ ಸಾಲಿಗೆ ರಾಜ್ಯ ಮಟ್ಟದ ಉತ್ತಮ ಶಿಕ್ಷಕರ ಪ್ರಶಸ್ತಿಗೆ ಆಯ್ಕೆಯಾಗಿರುವ ಶಿಕ್ಷಕಿಯರಿಗೆ "ಮಾತೆ ಸಾವಿತ್ರಿ ಬಾಯಿ ಫುಲೆ" ಅವರ ಹೆಸರಿನಲ್ಲಿ ಪ್ರಶಸ್ತಿ ಪ್ರದಾನ ಮಾಡಲು ಸರ್ಕಾರವು ಅನುಮತಿ ನೀಡಿದೆ.

ಪ್ರಶಸ್ತಿಗೆ ಆಯ್ಕೆಯಾಗಿರುವ ಪ್ರಾಥಮಿಕ ಶಾಲಾ ಶಿಕ್ಷಕರು, ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ ಅಮೃತಾಪುರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕನ್ನಡ ಶಿಕ್ಷಕರು ಉಮೇಶ.ಟಿ.ಪಿ. ಎಂಪ್ಲಾಯಿ ಸಂಖ್ಯೆ: 1907652, ಬೆಳಗಾವಿ ಜಿಲ್ಲೆಯ ಬೆಳಗಾವಿ ನಗರ, ಭಾಂದೂರ ಗಲ್ಲಿ, ನಂ.7, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ (ಮರಾಠಿ) ಕನ್ನಡ ಶಿಕ್ಷಕರು ಹೇಮಾ.ಪಿ.ಅಂಗಡಿ ಎಂಪ್ಲಾಯಿ ಸಂಖ್ಯೆ: 1876328, ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಬೆಂಡೋಣಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿಜ್ಞಾನ ಶಿಕ್ಷಕರು ಚಂದ್ರು ವಾಯ್ ಎ, ಎಂಪ್ಲಾಯಿ ಸಂಖ್ಯೆ: 2117211, ಬಳ್ಳಾರಿ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಮಾಲವಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕನ್ನಡ ಶಿಕ್ಷಕರು ಪರಮೇಶ್ವರಯ್ಯ ಎಂ. ಎಂಪ್ಲಾಯಿ ಸಂಖ್ಯೆ: 1439952, ಧಾರವಾಡ ಜಿಲ್ಲೆಯ ಕಲಘಟಗಿ ತಾಲ್ಲೂಕಿನ ಚಳಮಟ್ಟಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕನ್ನಡ ಶಿಕ್ಷಕರು ಮಾರುತಿ ಹನುಮಪ್ಪ ಎಂಪ್ಲಾಯಿ ಸಂಖ್ಯೆ: 1128472, ಶಿವಮೊಗ್ಗ ಜಿಲ್ಲೆಯ ಸಾಗರ ತಾಲ್ಲೂಕಿನ ಬಿ-ಹೊಸೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರು ಪ್ರಕಾಶ್ ಕೆ.ಎಸ್. ಎಂಪ್ಲಾಯಿ ಸಂಖ್ಯೆ: 1460138, ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಕಾತ್ರಿಕೆಹಾಲ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕನ್ನಡ ಶಿಕ್ಷಕರು ಶಿವಶಂಕರಯ್ಯ ಹೆಚ್.ಎ ಎಂಪ್ಲಾಯಿ ಸಂಖ್ಯೆ: 1132182, ಗದಗ ಜಿಲ್ಲೆಯ ರೋಣ ತಾಲ್ಲೂಕಿನ ಹೊಸಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರು ಪಂಚಯ್ಯ ರಾಚಯ್ಯ ಹಿರೇಮಠ ಎಂಪ್ಲಾಯಿ ಸಂಖ್ಯೆ: 1349852, ಬಾಗಲಕೋಟೆ ಜಿಲ್ಲೆಯ ಬೀಳಗಿ ತಾಲ್ಲೂಕಿನ ಹೆಗ್ಗೂರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕನ್ನಡ ಶಿಕ್ಷಕರು ಸದಪ್ಪ (ಸದಾನಂದ) ದುಂಡಪ್ಪ ಏಳಗಂಟಿ ಎಂಪ್ಲಾಯಿ ಸಂಖ್ಯೆ: 1335724, ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ತಾಲ್ಲೂಕಿನ ಇಕ್ಕಡಹಳ್ಳಿ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿಜ್ಞಾನ ಶಿಕ್ಷಕರು ಗೋಪಾಲಸ್ವಾಮಿ ಡಿ. ಎಂಪ್ಲಾಯಿ ಸಂಖ್ಯೆ: 1500993, ರಾಮನಗರ ಜಿಲ್ಲೆ ರಾಮನಗರ ಪಟ್ಟಣದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯ (ಕನ್ನಡ) ಶಿಕ್ಷಕರು ಕೃಷ್ಣಪ್ಪ ಎಸ್ ಎಂಪ್ಲಾಯಿ ಸಂಖ್ಯೆ: 1319685, ಹಾವೇರಿ ಜಿಲ್ಲೆ ಶಿಗ್ಗಾಂವ್ ತಾಲ್ಲೂಕುಗುಡ್ಡದಚನ್ನಾಪುರ ಪ್ಲಾಟ್‌ನ ಸರ್ಕಾರಿ ಕಿರಿಯ

ಪ್ರಾಥಮಿಕ ಶಾಲೆಯ ಶಿಕ್ಷಕರು ಜಿ.ಎಸ್.ಉಂಕಿ ಎಂಪ್ಲಾಯಿ ಸಂಖ್ಯೆ: 1482338, ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ತಾಲ್ಲೂಕಿನ ಪೆಂಡ್ಲಿವಾರಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಕನ್ನಡ ಶಿಕ್ಷಕರು ಉಷಾ.ವಿ ಎಂಪ್ಲಾಯಿ ಸಂಖ್ಯೆ: 2321661, ಬೆಂಗಳೂರು ಉತ್ತರ ಜಿಲ್ಲೆ ಬೆಂ.ಉ.ವ–01 ವಿಶ್ವನೀಡಂ ಅಂಚೆ ಹೆರೋಹಳ್ಳಿ ಸರ್ಕಾರಿ ಪ್ರಾಥಮಿಕ ಶಾಲೆಯ ಶಿಕ್ಷಕರು ಜಮುನ ಬಿ.ಎ. ಎಂಪ್ಲಾಯಿ ಸಂಖ್ಯೆ: 1366064, ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು ಕಟ್ಟದ ಬೈಲು ಸರ್ಕಾರಿ (ಜಿಲ್ಲಾ ಪಂಚಾಯತ್) ಹಿರಿಯ ಪ್ರಾಥಮಿಕ ಶಾಲೆಯ ಕನ್ನಡ ಶಿಕ್ಷಕರು ಎಡ್ವರ್ಡ್ ಡಿಸೋಜಾ ಎಂಪ್ಲಾಯಿ ಸಂಖ್ಯೆ: 1232664, ಬೆಂಗಳೂರು ಗ್ರಾಮಾಂತರ ಜಿಲ್ಲೆ ನೆಲಮಂಗಲ ತಾಲ್ಲೂಕು ಗೋವಿಂದಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರು ವಿ.ಜಿ.ವೆಂಕಟಾಚಲಯ್ಯ ಎಂಪ್ಲಾಯಿ ಸಂಖ್ಯೆ: 1846364, ಮೈಸೂರು ಜಿಲ್ಲೆಯ ಮೈಸೂರು ತಾಲ್ಲೂಕಿನ ಮುದುಕಿ ಚಿಕ್ಕನಹುಂಡಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರು ಮಹಾದೇವ ಎಂಪ್ಲಾಯಿ ಸಂಖ್ಯೆ: 2393262, ಮಂಡ್ಯ ಜಿಲ್ಲೆ ಮಂಡ್ಯ ಉತ್ತರ ಜಿಲ್ಲೆ ಅಲಕೆರೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕರು ಸ್ವಾಮಿ ಎಂಪ್ಲಾಯಿ ಸಂಖ್ಯೆ: 1069113, ದಾವಣಗೆರೆ ಜಿಲ್ಲೆ ಚನ್ನಗಿರಿ ತಾಲ್ಲೂಕು ಕಬ್ಬಳ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಹಿಂದಿ ಶಿಕ್ಷಕರು ಹೆಚ್.ಎಂ.ಮಂಗಳ ಎಂಪ್ಲಾಯಿ ಸಂಖ್ಯೆ: 1790223, ಕೊಪ್ಪಳ ಜಿಲ್ಲೆ ಕೊಪ್ಪಳ ತಾಲ್ಲೂಕಿನ ಮಾದಿನೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಚಿತ್ರಗಾರ ಶಿಕ್ಷಕರು ನಾರಾಯಣಪ್ಪ ಎಂಪ್ಲಾಯಿ ಸಂಖ್ಯೆ: 1103307.

ಪ್ರಶಸ್ತಿಗೆ ಆಯ್ಕೆಯಾಗಿರುವ ಪ್ರೌಢ ಶಾಲಾ ಶಿಕ್ಷಕರು, ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ಹನುಮಸಾಗರ ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢ ಶಾಲಾ ವಿಭಾಗ) ಕಲಾ ಶಿಕ್ಷಕರು ಕಿಶನ್ ರಾವ್ ಎಂಪ್ಲಾಯಿ ಸಂಖ್ಯೆ: 1265627, ಚಿಕ್ಕಬಳ್ಳಾಪುರ ಜಿಲ್ಲೆ ಗೌರಿಬಿದನೂರು ತಾಲ್ಲೂಕಿನ ಅಲೀಪುರ ಸರ್ಕಾರಿ ಪ್ರೌಢ ಶಾಲೆಯ ವಿಜ್ಞಾನ ಶಿಕ್ಷಕರು ಆರ್.ಯು.ನವೀನ್ ಎಂಪ್ಲಾಯಿ ಸಂಖ್ಯೆ: 2360746, ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ರೇಖಲಗೆರೆ ಲಂಬಾಣಿ ಹಟ್ಟಿ ಸರ್ಕಾರಿ ಪ್ರೌಢ ಶಾಲೆಯ ವಿಜ್ಞಾನ ಶಿಕ್ಷಕರು ಜಿ.ರಂಗನಾಥ ಎಂಪ್ಲಾಯಿ ಸಂಖ್ಯೆ: 2410229, ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲ್ಲೂಕಿನ ಕಳಸ ಕರ್ನಾಟಕ ಪಬ್ಲಿಕ್ ಶಾಲೆಯ ಆಂಗ್ಲ ಶಿಕ್ಷಕರು ಹೆಚ್.ಎನ್.ಶಿವಕುಮಾರ್ ಎಂಪ್ಲಾಯಿ ಸಂಖ್ಯೆ: 1665471, ಬೀದರ್ ಜಿಲ್ಲೆ ಔರಾದದ ತಾಲ್ಲೂಕಿನ ಸಂತಪೂರ ಸರ್ಕಾರಿ ಪ್ರೌಢ ಶಾಲೆಯ ಕನ್ನಡ ಶಿಕ್ಷಕರು ಶಿವಲಿಂಗ ಎಂಪ್ಲಾಯಿ ಸಂಖ್ಯೆ: 1991004, ಕೊಡಗು ಜಿಲ್ಲೆ ಸೋಮವಾರಪೇಟೆ ತಾಲ್ಲೂಕು ಕುಶಾಲ ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢ ಶಾಲಾ ವಿಭಾಗ) ದೈಹಿಕ ಶಿಕ್ಷಕರು (ದರ್ಜೆ–2) ಸದಾಶಿವಯ್ಯ ಎಸ್.ಪಲ್ಲೇದ ಎಂಪ್ಲಾಯಿ ಸಂಖ್ಯೆ: 1714725, ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿ ತಾಲ್ಲೂಕು ಕೋನಂದೂರು ಕರ್ನಾಟಕ ಪಬ್ಲಿಕ್ ಶಾಲೆಯ ನಾಟಕ ಶಿಕ್ಷಕರು ಶ್ರೀಕಾಂತ ರಾಮ ಪಟಗಾರ ಎಂಪ್ಲಾಯಿ ಸಂಖ್ಯೆ: 2267557, ತುಮಕೂರು ಜಿಲ್ಲೆಯ ಹೆಗ್ಗೆರೆ ಸಕಾರಿ ಪ್ರೌಢ ಶಾಲೆಯ ಮುಖ್ಯ ಶಿಕ್ಷಕರು ಎಂ.ಎಸ್.ನಟರಾಜು ಎಂಪ್ಲಾಯಿ ಸಂಖ್ಯೆ: 1532342, ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲ್ಲೂಕು ಮಹಾಲಿಂಗಪೂರದ ಶ್ರೀ ಚ.ಪಾ. (ಕೆ.ಎಲ್.ಇ.ಸಂಸ್ಥೆ) ಅನುದಾನಿತ ಪದವಿ ಪೂರ್ವ ಕಾಲೇಜು (ಮಾಧ್ಯಮಿಕ ವಿಭಾಗ) ವಿಜ್ಞಾನ ಶಿಕ್ಷಕರು ಸಪನಾ ಶ್ರೀಶೈಲ ಅನಿಗೋಳ ಎಂಪ್ಲಾಯಿ ಸಂಖ್ಯೆ: 100122464, ವಿಜಯಪುರ ಜಿಲ್ಲೆ ಮುದ್ದೇಬಿಹಾಳ ತಾಲ್ಲೂಕು ಪೀರಾಪೂರ ಸರ್ಕಾರಿ ಪ್ರೌಢ ಶಾಲೆಯ ವಿಜ್ಞಾನ ಶಿಕ್ಷಕರು ಬಸವರಾಜ ಶರಣಪ್ಪ ಎಂಪ್ಲಾಯಿ ಸಂಖ್ಯೆ: 1963647, ಮೈಸೂರು ಜಿಲ್ಲೆ ಹೆಗ್ಗಡದೇವನಕೋಟೆ ತಾಲ್ಲೂಕಿನ ಜಿ.ಬಿ.ಸರಗೂರು ಸರ್ಕಾರಿ ಪ್ರೌಢ ಶಾಲೆಯ ಚಿತ್ರಕಲಾ ಶಿಕ್ಷಕರು ಕೆ.ಸಂಗೀತಾ ಇವರಿಗೆ ತಲಾ ರೂ. 10,000/– ರಂತೆ ಒಟ್ಟು ರೂ. 3,10,000/– ಗಳ ನಗದು ಪುರಸ್ಕಾರ ನೀಡಲು ಮತ್ತು ಅವರ ಶಾಲೆಗಳ ಅಭಿವೃದ್ಧಿಗೆ ಪ್ರತಿ ಶಾಲೆಗೆ ರೂ. 50,000/– ರಂತೆ ಒಟ್ಟು ರೂ. 15,50,000/– ಗಳನ್ನು ಬೆಂಗಳೂರಿನ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ ಮತ್ತು ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿಯಿಂದ ವೆಚ್ಚ ಭರಿಸಿ ಪಾವತಿಸಲು ಅನುಮತಿ ನೀಡಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ದೂರ ಶಿಕ್ಷಣ ನಿರ್ದೇಶನಾಲಯದಲ್ಲಿ ಪದವಿ ಪ್ರವೇಶ ಪ್ರಾರಂಭ

ಬೆಂಗಳೂರು, ಸೆಪ್ಟೆಂಬರ್ 04 (ಕರ್ನಾಟಕ ವಾರ್ತೆ):

ದೂರ ಶಿಕ್ಷಣ ನಿರ್ದೇಶನಾಲಯವು 2020–21 ನೇ ಸಾಲಿನ ದ್ವಿತೀಯ ಮತ್ತು ತೃತೀಯ ಸ್ನಾತಕ ಹಾಗೂ ದ್ವಿತೀಯ ಸ್ನಾತಕೋತ್ತರ ಪದವಿಗಳಿಗೆ, ಆಗಸ್ಟ್ 25 ರಿಂದ ಪ್ರವೇಶಾತಿಗಳನ್ನು ಪ್ರಾರಂಭಗೊಳಿಸಲಾಗಿದೆ.

ಅರ್ಜಿ ಫಾರಂಗಳನ್ನು ವಿತರಿಸುವ ಕೊನೆಯ ದಿನಾಂಕ:(ದಂಡವಿಲ್ಲದೆ):25/08/2021 ರಿಂದ 30/09/2021, ಅರ್ಜಿ ಫಾರಂಗಳನ್ನು ಪಡೆಯಲು ಕೊನೆಯ ದಿನಾಂಕ (ರೂ. 200/–ದಂಡ ಶುಲ್ಕದೊಂದಿಗೆ):01/10/2021 ರಿಂದ 30/10/2021 , ಭರ್ತಿ ಮಾಡಿದ ಅರ್ಜಿ ಫಾರಂಗಳನ್ನು ಎಲ್ಲಾ ದಾಖಲಾತಿಗಳೊಂದಿಗೆ ಸಲ್ಲಿಸಲು ಕೊನೆಯ ದಿನಾಂಕ (ದಂಡವಿಲ್ಲದೆ): ನವೆಂಬರ್ 15 ಆಗಿರುತ್ತದೆ.

ಸೂಚನೆ: ಅರ್ಜಿ ಶುಲ್ಕ ಹಾಗೂ ಪ್ರವೇಶಾತಿ ಶುಲ್ಕವನ್ನು ವಿಶ್ವವಿದ್ಯಾಲಯ ಅಂತರ್ಜಾಲ/ಆನ್‌ಲೈನ್ ಆದ www.bangaloreuniversity.ac.in ಮೂಲಕ ಪಾವತಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು: 080–22961264, 22961265, ಹಾಗೂ ಅರ್ಜಿಗಳನ್ನು ಅಂತರ್ಜಾಲ ವೆಬ್‌ಸೈಟ್ www.dccbub.in ನಿಂದ ಪಡೆಯಬಹುದು. ಹಾಗೂ ಕಛೇರಿ ವಿಳಾಸ: ದೂರ ಶಿಕ್ಷಣ ನಿರ್ದೇಶನಾಲಯ, ಜ್ಞಾನಭಾರತಿ ಆವರಣ, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು–560056 ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## Admission for II & III Year UG and II Year PG Courses at DDE

Bengaluru, September 04, (Karnataka Information):

Admission to various II & III Year UG Courses and II Year P.G Courses offered by Directorate of Distance Education, Jnanbharathi Campus, Bangalore University, Bangalore – 560056, has been started from 25/08/2021 for the academic year 2020-21.

Last date for obtaining the application from (Without Fine): **25/08/2021 to 30/09/2021**, Last date for obtaining the application form (With Fine of Rs.200/-):**01/10/2021 to 30/10/2021**, Last date for submission of filled application form with all enclosures: **15/11/2021, Further information to contact Phone No:** 080–22961264, 22961265.

**Note:** Application fee as well as Admission fee is through online payment vide website : www.bangaloreuniversity.ac.in. only. More information and application form can be downloaded from the website www.dccbub.in .

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ (AQI)ಸೂಚ್ಯಂಕ

ಬೆಂಗಳೂರು, ಸೆಪ್ಟೆಂಬರ್ 04 (ಕರ್ನಾಟಕ ವಾರ್ತೆ):

**ದಿನಾಂಕ: 4.9.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 42 | ಉತ್ತಮ | CO |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 43 | ಉತ್ತಮ | CO |
| 3 | ಕವಿಕ, ಮೈಸೂರುರಸ್ತೆ | 77 | ತೃಪ್ತಿಕರ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 31 | ಉತ್ತಮ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 73 | ತೃಪ್ತಿಕರ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 54 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 50 | ಉತ್ತಮ | $PM_{10}$ |
| **(4.9.2021 at 10.05 AM)** | | | | |

| | | | | |
|---|---|---|---|---|
| 8 | BWSSB,ಕಾಡಬೀಸನಹಳ್ಳಿ | 48 | ಉತ್ತಮ | $PM_{10}$ |
| 9 | ಪೀಣ್ಯ | 57 | ತೃಪ್ತಿಕರ | Ozone |
| 10 | ಬಿಟಿಎಂ ಲೇಔಟ್ | 51 | ತೃಪ್ತಿಕರ | $PM_{10}$ |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಶ್ವಾಸಕೋಶದ ಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 4.9.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 42 | Good | CO |
| 2 | Jayanagar 5th Block, Shalini ground | 43 | Good | CO |
| 3 | KAVIKA, Mysore Road | 77 | Satisfactory | $PM_{10}$ |
| 4 | Rajeev Gandhi Institute of Chest Disease, NIMHANS, Hombegowda Nagar | 31 | Good | $PM_{10}$ |
| 5 | HSR Layout, near Central Silkboard | 73 | Satisfactory | $PM_{10}$ |
| 6 | City Railway Station, Magestic, Bengaluru | 54 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 50 | Good | $PM_{10}$ |

| (4.9.2021 at 10.05 AM) | | | | |
|---|---|---|---|---|
| 8 | BWSSB, Kadabesanahalli | 48 | Good | $PM_{10}$ |
| 9 | Peenya | 57 | Satisfactory | Ozone |
| 10 | BTM Layout | 51 | Satisfactory | $PM_{10}$ |

| **Category (Range)** | **Possible Health Impacts** | **Category (Range)** | **Possible Health Impacts** |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |